ಇ) ಸರ್ಕಾರ ಈ ವಿಚಾರದಲ್ಲಿ ಇದುವರೆಗೆ ಕೈಗೊಂಡಿರುವ ಕ್ರಮಗಳೇನು?

ಈ) ಸರ್ಕಾರ ಒಳ ಮೀಸಲಾತಿಯನ್ನು ಜಾರಿಗೊಳಿಸುವುದು ಯಾವಾಗ?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) ವಿಷಯವು ಪರಿಶೀಲನೆಯಲ್ಲಿದೆ

ಆ) ಪರಿಶೀಲನೆಯ ನಂತರ ಮಾಹಿತಿ ಲಭ್ಯವಾಗುವುದು

ಇ) ಉದ್ಭವಿಸುವುದಿಲ್ಲ

ಈ) ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಸದ್ಯದಲ್ಲೇ ಅಧ್ಯಕ್ಷರು ಹಾಗೂ ಸದಸ್ಯರನ್ನು ನೇಮಕ ಮಾಡಲಿದ್ದು, ನೇಮಕವಾದ ನಂತರ ಆಯೋಗವು ಸಲ್ಲಿಸುವ ವರದಿಯ ಬಗ್ಗೆ ಪರಿಶೀಲಿಸಿ ಕ್ರಮ ಜರುಗಿಸಲಾಗುವುದು

583 (892) ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಫಲಾನುಭವಿಗಳಿಗೆ ನೇರ ಸಾಲ ಯೋಜನೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಈ ಯೋಜನೆ ಸ್ಥಗಿತಗೊಳ್ಳಲು ಕಾರಣವೇನು, ಚಾಮುಂಡೇಶ್ವರಿ ಕ್ಷೇತ್ರದಲ್ಲಿ 2006ರಲ್ಲಿ ಎಷ್ಟು ಸಾಲ ನೀಡಲಾಗಿದೆ?

ಇ) ಈ ನಿಗಮದಲ್ಲಿ ಸಾಲ ವಸೂಲಾತಿ ನಿರೀಕ್ಷಣ ಮಟ್ಟದಲ್ಲಿಲ್ಲದಿರುವುದು ನಿಜವೆ, ಇದೇ ಮಟ್ಟ ಮುಂದುವರಿದಲ್ಲಿ ನೈಜ ಫಲಾನುಭವಿಗಳಿಗೆ ತೊಂದರೆ ಯಾಗುವುದಿಲ್ಲವೆ?

ಈ) ಹಾಗಿದ್ದಲ್ಲಿ, ಸರ್ಕಾರ ನೇರ ಸಾಲ ಯೋಜನೆಯನ್ನು ಪುನರಾರಂಭಿಸಲು ಕೈಗೊಳ್ಳುವ ಕ್ರಮವೇನು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) ನೇರ ಸಾಲ ಯೋಜನೆ ಸ್ಥಗಿತಗೊಂಡಿರುವುದಿಲ್ಲ ರಾಷ್ಟ್ರೀಯ ಪರಿಶಿಷ್ಟ ಜಾತಿ ಹಣಕಾಸು ಅಭಿವೃದ್ಧಿ ನಿಗಮ ಹಾಗೂ ರಾಷ್ಟ್ರೀಯ ಪರಿಶಿಷ್ಟ ವರ್ಗಗಳ ಹಣಕಾಸು ಅಭಿವೃದ್ಧಿ ನಿಗಮಗಳಿಂದ ಅವಧಿಸಾಲ ಪಡೆದು ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ

ಆ) ನೇರ ಸಾಲ ಯೋಜನೆ ಸ್ಥಗಿತಗೊಂಡಿಲ್ಲ ಚಾಮುಂಡೇಶ್ವರಿ ಕ್ಷೇತ್ರದಲ್ಲಿ 2006ರಲ್ಲಿ ಪ್ರತಿ ಫಲಾನುಭವಿಗೆ ರೂ 5,000/– ದಂತೆ ರೂ 2,500 ಸಹಾಯಧನ ಹಾಗೂ ರೂ 2,500 ಸಾಲದಂತೆ ಸೌಲಭ್ಯ ನೀಡಿದೆ ಇದಕ್ಕಾಗಿ ಒಟ್ಟು 1,48,50,000 ರೂ ಗಳನ್ನು ಸಾಲವಾಗಿ ನೀಡಿದೆ

ಇ) ನಿರೀಕ್ಷಿತ ಮಟ್ಟ ತಲುಪಿಲ್ಲದಿರುವುದು ನಿಜವಾದರೂ ನಿರೀಕ್ಷಿತ ಮಟ್ಟ ತಲುಪಲು ಅನೇಕ ವಿಧವಾದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ

ಈ) ಉದ್ಭವಿಸುವುದಿಲ್ಲ

584(714) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗದಲ್ಲಿರುವ ಬಾಪೂಜಿ ಆಯುರ್ವೇದಿಕ್ ಕಾಲೇಜಿಗೆ ಸರ್ಕಾರದಿಂದ ಮಂಜೂರಾಗಿರುವ ವಿದ್ಯಾರ್ಥಿ ಸೀಟುಗಳ ಸಂಖ್ಯೆ ಹಾಗೂ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು (ಹುದ್ದೆವಾರು ವಿವರಗಳನ್ನು ಒದಗಿಸುವುದು)?

ಆ) ಈ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ನಿಯಮಗಳ ಪ್ರಕಾರ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ (ಪ್ರಯೋಗಾಲಯ, ಆಸ್ಪತ್ರೆ ಇತ್ಯಾದಿ)?

ಇ) ಈಗ ಕಾಲೇಜಿನಲ್ಲಿರುವ ವಿದ್ಯಾರ್ಥಿಗಳ ಹಾಗೂ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು?

ಈ) ಹೆಚ್ಚುವರಿಯಾಗಿರುವ ವಿದ್ಯಾರ್ಥಿಗಳು ಎಷ್ಟು ಹಾಗೂ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರಿದ್ದಾರೆಯೇ?

ಉ) ಹೆಚ್ಚುವರಿ ವಿದ್ಯಾರ್ಥಿಗಳ ಪ್ರವೇಶಕ್ಕೆ ಸರ್ಕಾರ ಅನುಮತಿ ನೀಡಿದೆಯೇ ಹಾಗೂ ಇವರಿಗೆ ಪರೀಕ್ಷೆಗೆ ಕುಳಿತುಕೊಳ್ಳಲು ಅನುಮತಿ ನೀಡಲಾಗಿದೆಯೇ?

ಊ) ಒಂದು ವೇಳೆ ಅನುಮತಿ ನೀಡದೇ ಇದ್ದಲ್ಲಿ ಇದಕ್ಕೆ ಕಾರಣಗಳೇನು?

ಋ) ಸದರಿ ಕಾಲೇಜಿನಲ್ಲಿ ಸರ್ಕಾರವು ನಿಗದಿಪಡಿಸಿರುವ ನಿಯಮಗಳನ್ನು ಉಲ್ಲಂಘನೆ ಮಾಡಿ ಅನುಮತಿ ನೀಡಿದ್ದಕ್ಕಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುವುದು ನಿಜವೇ?

ಎ) ಹಾಗಿದ್ದಲ್ಲಿ ಸರ್ಕಾರದ ನಿಯಮಗಳನ್ನು ಉಲ್ಲಂಘನೆ ಮಾಡಿರುವ ಮೇಲ್ಕಂಡ ಶಿಕ್ಷಣ ಸಂಸ್ಥೆಯ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು?